ಸಿಸಿ ನಂಃ 1969/2023

ಸಿ.ಡಬ್ಲೂ – 9

ಪಿ.ಡಬ್ಲೂ –5

## 4 ನೇ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ ರವರ ನ್ಯಾಯಾಲಯ ಧಾರವಾಡ.

| | | |
|---|---|---|
| ಸಾಕ್ಷಿದಾರರ ಹೆಸರು | : | ಚಂದ್ರಲೇಖಾ |
| ಗಂಡನ ಹೆಸರು | : | ಜಗನ್ನಾಥ |
| ವಯಸ್ಸು | : | 53 ವರ್ಷ |
| ಉದ್ಯೋಗ | : | ಡ ಬ್ಲ್ಯೂಎ ಎಸ್ ಐ |
| ವಾಸ ಸ್ಥಳ | : | ಹುಬ್ಬಳ್ಳಿ . |

ಸತ್ಯ ಪ್ರತಿಜ್ಞೆ ಮಾಡಿಸಲಾಯಿತು :03-02-2026

**ಮುಖ್ಯ ವಿಚಾರಣೆ : ಮಾನ್ಯ ಹಿಸಸಅ ರವರಿಂದ**

2022 ರಿಂದ 2025 ರವರೆಗೆ ಧಾರವಾಡ ಗ್ರಾಮೀಣ ಠಾಣೆಯಲ್ಲಿ ಎ ಎಸ್ ಐ ಕೆಲಸ ಮಾಡಿರುತ್ತೇನೆ. ದಿಃ 14-12-2022 ರಂದು ಎ ಸ್ ಎಚ್ ಓ ಕರ್ತವ್ಯದಲ್ಲಿದ್ದಾಗ ಮಧ್ಯಾಹ್ನ 1.30 ಕ್ಕೆ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿರುವ ದೂರನ್ನು ಸ್ವಿಕರಿಸಿ ಆರೋಪಿತರ ವಿರುದ್ಧ ಪ್ರವವ ದಾಖಲಿಸಿ ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದೇ ದಿನ ಚಾಸಾ-2 ಮತ್ತು 3 ರವರ ಸಮಕ್ಷಮ ಘಟಣಾ ಸ್ಥಳಕ್ಕೆ ಭೇಟಿ ನೀಡಿ 4.30 ರಿಂದ 5.30 ಪಂಚನಾಮೆ ಮಾಡಿ ಪಂಚನಾಮೆ ಕಾಲಕ್ಕೆ ಹಿಡಿ ಗಾತ್ರದ ಕಲ್ಲನ್ನು ಜಪ್ತು ಪಡಿಸಿಕೊಂಡಿರುತ್ತೇನೆ.

ಸಿಸಿ ನಂಃ 1969/2023

ಸಿ.ಡಬ್ಲೂ – 9

ಪಿ.ಡಬ್ಲೂ –5

ನಂತರ ಚಾಸಾ–5 ರಿಂದ 7 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ಜಪ್ತು ಪಡಿಸಿದ ಮುದ್ದೆಮಾಲನ್ನು ಮಾಲುಪಟ್ಟಿಯಲ್ಲಿ ನಮೂದು ಮಾಡಿ ನ್ಯಾಯಾಲಯಕ್ಕೆ ನಿವೇದನೆ ಕೊಟ್ಟಿರುತ್ತೇನೆ. ದಿಃ 25–02–2023 ರಂದು ಚಾಸಾ–1 ರವರ ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ.

ದಿಃ 03–03–2023 ರಂದು ಆರೋಪಿ ಠಾಣೆಗೆ ಹಾಜರಾಗಿದ್ದು ಅವನಿಗೆ ದಸ್ತಗಿರಿ ಕ್ರಮ ಜರುಗಿಸಿ ಸೂಕ್ತ ಜಾಮೀನಿನ ಮೇಲೆ ಬಿಡುಗಡೆ ಮಾಡಿರುತ್ತೇನೆ. ನಂತರ ತನಿಖೆಯನ್ನು ಪೂರ್ಣಗೊಳಿಸಿ ಆರೋಪಿತರ ವಿರುದ್ಧ ದೋಷಾರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

ಸಾಕ್ಷಿಯು ದೂರಿನಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ.4 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ. 4 (ಎ) ಎಂದು ಗುರುತಿಸಲಾಯಿತು. ಪ್ರ.ವ.ವ ವರದಿಯನ್ನು ನಿಪಿ. 5 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ. 5 (ಎ) ಎಂದು ಗುರುತಿಸಲಾಯಿತು. ಗಾಯದ ಪ್ರಮಾಣ ಪತ್ರವನ್ನು ನಿಪಿ. 6 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿಪಿ.6 (ಎ) ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ–1 ರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ–1 (ಸಿ ) ಎಂದು ಗುರುತಿಸಲಾಯಿತು.

ಸಿಸಿ ನಂಃ 1969/2023

ಸಿ.ಡಬ್ಲೂ – 9

ಪಿ.ಡಬ್ಲೂ –5

**ತನಿಖಾಧಿಕಾರಿ ಮುದ್ದೆಮಾಲುಗಳನ್ನು ಇನ್ನು ನ್ಯಾಯಾಲಯಕ್ಕೆ ಸಲ್ಲಿಸಿಲ್ಲ ಆದ್ದರಿಂದ ಪ್ರಕರಣ ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ,

**( ಆನಂದ ಎಸ್ ಕರಿಯಮ್ಮನವರ್)**

4 ನೇ ಹಿ ದಿ ನ್ಯಾ ಹಾಗೂ ಜೆಎಂಎಫ್‌ಸಿ,

ಧಾರವಾಡ.